# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2771 |
| ಸದಸ್ಯರ ಹೆಸರು | : | ಶ್ರೀ ಎನ್.ರವಿಕುಮಾರ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 28-03-2022 |
| ಉತ್ತರಿಸುವ ಸಚಿವರು | : | ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 3 ವರ್ಷಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ರಾಜ್ಯದಲ್ಲಿ ಕಾರ್ಯಾಚರಿಸುತ್ತಿರುವ ಹಣಕಾಸು ಸಂಸ್ಥೆಗಳಲ್ಲಿ ಕನ್ನಡ ಕಡ್ಡಾಯ ಕುರಿತು ಸರ್ಕಾರ ಕೈಗೊಂಡ ಕ್ರಮಗಳ ಬಗ್ಗೆ ಎಷ್ಟು ಬಾರಿ ಪರಿಶೀಲಿಸಿದೆ: | ಡಾ\|\| ಸರೋಜಿನಿ ಮಹಿಷಿ ವರದಿಯನ್ವಯ ಖಾಸಗಿ ಸಂಘ-ಸಂಸ್ಥೆಗಳಲ್ಲಿ, ಕೇಂದ್ರೋದ್ಯಮಗಳು ಹಾಗೂ ಬ್ಯಾಂಕ್ ಗಳಲ್ಲಿಯೂ ಕನ್ನಡದಲ್ಲಿಯೇ ವ್ಯವಹರಿಸುವಂತೆ ಕ್ರಮವಹಿಸಲು ಸೂಚಿಸಲಾಗುತ್ತಿದ್ದು, ಅದರಂತೆ ಕನ್ನಡದಲ್ಲಿ ವ್ಯವಹರಿಸದ ಸರ್ಕಾರಿ ಕಛೇರಿಗಳು, ಬ್ಯಾಂಕ್ ಗಳು, ಖಾಸಗೀ ಸಂಘ-ಸಂಸ್ಥೆಗಳು ಸೇರಿ ಒಟ್ಟು 64 ಕನ್ನಡ ಪ್ರಗತಿ ಪರಿಶೀಲನೆ ನಡೆಸಿ ಕನ್ನಡದಲ್ಲಿ ವ್ಯವಹರಿಸುವಂತೆ ಕ್ರಮವಹಿಸಲು ಸೂಚಿಸಲಾಗಿರುತ್ತದೆ. (ಪಟ್ಟಿ ಲಗತ್ತಿಸಿದೆ) |
| ಆ) | ರಾಜ್ಯದಲ್ಲಿರುವ ಹಲವಾರು ಬ್ಯಾಂಕುಗಳಲ್ಲಿನ ಅಧಿಕಾರಿ ಮತ್ತು ಸಿಬ್ಬಂದಿಗಳು ಅನ್ಯ ರಾಜ್ಯದವರಾಗಿದ್ದು ಅವರು ಇಲ್ಲಿನ ಭಾಷೆ ಕಲಿಯಲು ನಿರಾಸಕ್ತಿ ಹೊಂದಿರುವುದಲ್ಲದೆ ಬಡವರಿಗೆ, ಅಥವಾ ಕನ್ನಡ ಹೊರತುಪಡಿಸಿ ಇತರ ಭಾಷೆ ಬರದ ಸ್ಥಳೀಯರಿಗೆ ಬ್ಯಾಂಕಿನ ಸೇವೆ ಪಡೆಯಲು ತೀವ್ರ ಅಡಚಣೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಮುಂದುವರೆದು, ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಕನ್ನಡ ಭಾಷೆ ಕಲಿಸುವ ಕನ್ನಡ ಕಲಿಕಾ ಕೇಂದ್ರಗಳನ್ನು ನಡೆಸುವ ಮೂಲಕ ಕನ್ನಡ ಕಲಿಕೆಗೆ ಪ್ರೋತ್ಸಾಹ ನೀಡುತ್ತಿದೆ.<br>ಕನ್ನಡ ಭಾಷೆಯನ್ನು ಬೆಳೆಸುವ ಉದ್ದೇಶದಿಂದ ಕನ್ನಡ ಸ್ವಯಂ ಬೋಧನೆ ಎಂಬ ವಿಶೇಷ 06 ಪಠ್ಯಗಳನ್ನು ಸಿದ್ಧಪಡಿಸಿ ಕನ್ನಡ ಕಲಿಕೆಗೆ ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರ ರೂಪಿಸಿ ಕನ್ನಡ ನುಡಿ ಕಲಿಕೆ ಪಾಠ-1 ಮತ್ತು ಪಾಠ-2 ಅನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ವೆಬ್ ಸೈಟ್ ನಲ್ಲಿ ಅಪ್ ಲೋಡ್ ಮಾಡಲಾಗಿದೆ. |

| | | |
|---|---|---|
| ಇ) | ಅನ್ಯ ಜನಸಾಮಾನ್ಯರಿಗೆ ಬ್ಯಾಂಕುಗಳ ಸೇವೆ ರಾಜ್ಯದ ಆಡಳಿತ ಭಾಷೆಯಲ್ಲೇ ದೊರಕುವಂತಾಗಲು ಸರ್ಕಾರ ಕೈಗೊಂಡ ಕ್ರಮಗಳೇನು? | ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ನೇತೃತ್ವದ ತಜ್ಞರ ನಿಯೋಗ ದೆಹಲಿಗೆ ತೆರಳಿ ಕೇಂದ್ರ ಸರ್ಕಾರದ ಸಂಬಂಧಪಟ್ಟ ಸಚಿವರಿಗೆ ನಿರಂತರವಾಗಿ ಮನವಿಗಳನ್ನು ಸಲ್ಲಿಸಿ, ನೇಮಕಾತಿ ನಿಯಮಗಳನ್ನು ಬದಲಾವಣೆಗೊಳಿಸಲು ಕೋರಲಾಗಿದೆ. ಪ್ರಾಧಿಕಾರದ ನಿರಂತರ ಮನವಿ ಹಿನ್ನೆಲೆಯಲ್ಲಿ ಪ್ರಸ್ತುತ ಗ್ರಾಮೀಣ ಬ್ಯಾಂಕ್ ಗಳ ನೇಮಕಾತಿಯಲ್ಲಿ ಕನ್ನಡ ಬಲ್ಲವರಿಗೆ ಆದ್ಯತೆ ನೀಡಲಾಗುತ್ತಿದೆ ಹಾಗೂ ಇನ್ನುಳಿದ ಅಂಶಗಳ ಅನುಷ್ಠಾನಗಳಿಗಾಗಿ ಪ್ರಾಧಿಕಾರವು ಕೇಂದ್ರ ಸರ್ಕಾರವನ್ನು ನಿರಂತರವಾಗಿ ಒತ್ತಾಯಿಸುತ್ತಿದೆ. |

ಸಂಖ್ಯೆ: ಕಸಂವಾ 53 ಕೆಓಎಲ್ ಆಕ 2022.

**(ವಿ.ಸುನಿಲ್ ಕುಮಾರ್)**
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು